ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕೋವಿಡ್-19 ನಿಯಂತ್ರಣ ಕುರಿತು

ಶ್ರೀ ಹೆಚ್. ಎಂ. ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) -

56 (39) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಪ್ರಸಕ್ತ ಸಾಲಿನಲ್ಲಿ ಕೈಗೊಂಡ ಕಾರ್ಯಕ್ರಮಗಳಿಗೆ ವ್ಯಯವಾದ ಒಟ್ಟು ಹಣ ಎಷ್ಟು; (ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು)

(ಆ) ಖಾಸಗಿ ಆಸ್ಪತ್ರೆಗಳು ಕೋವಿಡ್ ರೋಗಿಗಳಿಗಾಗಿ ಸರ್ಕಾರ ರೂಪಿಸಿದ ಬೆಲೆಯ ಮಾನದಂಡ ಮೀರಿ ಹೆಚ್ಚು ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ನಿಯಂತ್ರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ರಾಜ್ಯದಲ್ಲಿ ಈವರೆಗೆ ಎಷ್ಟು ಕೋವಿಡ್ ಕಿಟ್‌ಗಳನ್ನು ವಿತರಿಸಲಾಗಿದೆ? (ಅಂಕಿ ಅಂಶಗಳೊಂದಿಗೆ ವಿವರ ನೀಡುವುದು)